ವಿಜಯವಾಣಿ
ಕನ್ನಡಿಗರ ಧ್ವನಿ

**Sunday 05th November 2023, Page No.7B**

## Kannada Festival at RV College

# ಆರ್.ವಿ.ಕಾಲೇಜಿನಲ್ಲಿ ಕನ್ನಡ ಹಬ್ಬ



**ಬೆಂಗಳೂರು:** ಪ್ರತಿಯೊಬ್ಬ ಕನ್ನಡಿಗನೂ ತನ್ನ ಜೀವಿತಾವಧಿಯಲ್ಲಿ ಒಂದಾದರೂ ಜ್ಞಾನಪೀಠ ಪುರಸ್ಕೃತಿ ಕೃತಿಯನ್ನು ಓದಬೇಕು ಎಂದು ವಿದ್ಯಾರ್ಥಿಗಳಿಗೆ ಆರ್.ವಿ. ಇಂಜಿನಿಯರಿಂಗ್ ಕಾಲೇಜು ಪ್ರಾಂಶುಪಾಲ ಡಾ. ಕೆ.ಎನ್. ಸುಬ್ರಮಣ್ಯ ಕಿವಿಮಾತು ಹೇಳಿದ್ದಾರೆ. ಕನ್ನಡ ರಾಜ್ಯೋತ್ಸವ ಅಂಗವಾಗಿ ಕಾಲೇಜಿನಲ್ಲಿ ಆಯೋಜಿಸಿದ್ದ 'ಕನ್ನಡ ಹಬ್ಬ' ಕಾರ್ಯಕ್ರಮವನ್ನು ಧ್ವಜಾರೋಹಣ ಮಾಡುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಮನೆಯೇ ಮೊದಲ ಪಾಠಶಾಲೆ ಎಂಬಂತೆ ಮಕ್ಕಳಿಗೆ ಬಾಲ್ಯದಿಂದಲೇ ಪಾಲಕರು ಕನ್ನಡ ಭಾಷೆ ಕಲಿಸಬೇಕು. ಮನೆಯಲ್ಲಿ ಹಾಗೂ ಹೊರಗೆ ಎಲ್ಲೇ ಹೋದರು ಕನ್ನಡ ಮಾತನಾಡುವ ಮೂಲಕ ಭಾಷೆಯನ್ನು ಬೆಳೆಸಬೇಕು ಮತ್ತು ಉಳಿಸಬೇಕು ಎಂದು ಹೇಳಿದರು.

ಕಾಲೇಜು ವಿದ್ಯಾರ್ಥಿಗಳು ಕನ್ನಡ ಹಾಡುಗಳನ್ನು ಹಾಡಿದರು, ಕನ್ನಡ ಗೀತೆಗಳಿಗೆ ನೃತ್ಯ ಪ್ರದರ್ಶನ ನೀಡಿದರು.

ಉಪ ಪ್ರಾಂಶುಪಾಲೆ ಡಾ. ಕೆ.ಎಸ್. ಗೀತಾ, ಕನ್ನಡ ಸಂಘದ ಪ್ರಾಧ್ಯಾಪಕ ಸಂಯೋಜಕ ಡಾ. ವಿಕ್ರಮ್, ಡಾ. ರಾಜಲಕ್ಷ್ಮೀ ಮೂಡುಬಿದಿರೆ, ಕಾಲೇಜು ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.